**ಕರ್ನಾಟಕ ಸರ್ಕಾರ**

**ಸಮಗ್ರ ಮಕ್ಕಳ ರಕ್ಷಣಾ ಯೋಜನೆ**

ಸಂ.ಕೆಎಸ್‌ಐಸಿಪಿಎಸ್/ಕೋವಿಡ್-19/2020-21

ನಿರ್ದೇಶನಾಲಯ
ಸಮಗ್ರ ಮಕ್ಕಳ ರಕ್ಷಣಾ ಯೋಜನೆ,
ಬೆಂಗಳೂರು, ದಿನಾಂಕ:09.04.2020

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು
ಜಿಲ್ಲಾ ಮಕ್ಕಳ ರಕ್ಷಣಾ ಘಟಕ,
30 ಜಿಲ್ಲೆಗಳು.

ಮಾನ್ಯರೇ,

ವಿಷಯ: ಬಾಲನ್ಯಾಯ ಕಾಯ್ದೆಯಡಿಯಲ್ಲಿ ನೋಂದಾಯಿಸಲ್ಪಟ್ಟ ಎಲ್ಲಾ ಸರ್ಕಾರಿ ಮತ್ತು ಸರ್ಕಾರೇತರ ಮಕ್ಕಳ ಪಾಲನಾ ಸಂಸ್ಥೆಗಳಲ್ಲಿ ಕೋವಿಡ್-19 ಮುನ್ನೆಚ್ಚರಿಕಾ ಕ್ರಮಗಳನ್ನು ಅನುಪಾಲಿಸುವ ಬಗ್ಗೆ.

*****

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಕೋವಿಡ್-19 ಮುನ್ನೆಚ್ಚರಿಕಾ ಕ್ರಮಗಳನ್ನು ಅನುಪಾಲಿಸುವ ನಿಟ್ಟನಲ್ಲಿ ಬಾಲನ್ಯಾಯ ಕಾಯ್ದೆಯಡಿಯಲ್ಲಿ ನೋಂದಾಯಿಸಲ್ಪಟ್ಟ ಎಲ್ಲಾ ಸರ್ಕಾರಿ ಮತ್ತು ಸರ್ಕಾರೇತರ ಮಕ್ಕಳ ಪಾಲನಾ ಸಂಸ್ಥೆಗಳಿಂದ ಹಲವಾರು ಮಾಹಿತಿಗಳನ್ನು ಕಲೆಹಾಕಿ ಕೇಂದ್ರ ಹಾಗೂ ರಾಜ್ಯ ಸರ್ಕಾರಕ್ಕೆ ಮತ್ತು ಉಚ್ಚ ಹಾಗೂ ಸರ್ವೋಚ್ಚ ನ್ಯಾಯಾಲಯಗಳಿಗೆ ಸಲ್ಲಿಸಬೇಕಾಗಿರುವ ಹಿನ್ನೆಲೆಯಲ್ಲಿ ಪ್ರತಿಯೊಂದು ಮಕ್ಕಳ ಪಾಲನಾ ಸಂಸ್ಥೆಯು ಜಿಲ್ಲಾ ಮಕ್ಕಳ ರಕ್ಷಣಾ ಘಟಕದೊಂದಿಗೆ ಸಹಕರಿಸಬೇಕಾಗಿರುತ್ತದೆ.

ಆದರೆ ಕೋವಿಡ್-19ಗೆ ಸಂಬಂಧಪಟ್ಟ ಮುನ್ನೆಚ್ಚರಿಕಾ ಕ್ರಮಗಳನ್ನು ಅನುಪಾಲಿಸುವುದರಲ್ಲಿ ಹಾಗೂ ಸದರಿ ಮಾಹಿತಿಯನ್ನು ಜಿಲ್ಲಾ ಮಕ್ಕಳ ರಕ್ಷಣಾ ಘಟಕಕ್ಕೆ ಸಲ್ಲಿಸುವುದರಲ್ಲಿ ಹಲವಾರು ಸರ್ಕಾರದ ಅನುದಾನ ಪಡೆಯದೇ ಇರುವಂತಹ ಖಾಸಗಿ ಮಕ್ಕಳ ಪಾಲನಾ ಸಂಸ್ಥೆಗಳು ಜಿಲ್ಲಾ ಮಕ್ಕಳ ರಕ್ಷಣಾ ಘಟಕದೊಂದಿಗೆ ಸಹಕರಿಸದೇ ಇರುವುದು ಕೇಂದ್ರ ಕಛೇರಿಯ ಗಮನಕ್ಕೆ ಬಂದಿರುತ್ತದೆ. ಈ ಹಿನ್ನೆಲೆಯಲ್ಲಿ ಈ ರೀತಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕಕ್ಕೆ ಸಹಕರಿಸದೇ ಇರುವ ಖಾಸಗಿ ಮಕ್ಕಳ ಪಾಲನಾ ಸಂಸ್ಥೆಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದೆಂದು ಹಾಗೂ ಇದೇ ವರ್ತನೆ ಮುಂದುವರೆದರೆ ಸಂಸ್ಥೆಗಳ ನೋಂದಣಿಯನ್ನು ರದ್ದುಗೊಳಿಸಿ, ಸಂಸ್ಥೆಯಲ್ಲಿರುವ ಮಕ್ಕಳನ್ನು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ವತಿಯಿಂದ ರಕ್ಷಣೆ ಮಾಡಲಾಗುವುದೆಂದು ತಿಳಿಸುತ್ತಾ, ಸದರಿ ಖಾಸಗಿ ಮಕ್ಕಳ ಪಾಲನಾ ಸಂಸ್ಥೆಗಳಿಗೆ ಸೂಕ್ತ ಎಚ್ಚರಿಕೆಯನ್ನು ನೀಡಿ ಸದರಿ ಸಂಸ್ಥೆಗಳಲ್ಲಿಯೂ ಸಹ ಕೋವಿಡ್-19ಗೆ ಸಂಬಂಧಪಟ್ಟ ಮುನ್ನೆಚ್ಚರಿಕಾ ಕ್ರಮಗಳು ಸುಗಮವಾಗಿ ಅನುಷ್ಠಾನಗೊಳ್ಳುವಂತೆ ಎಲ್ಲಾ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳಲು ಸೂಚಿಸಿದೆ.

ತಮ್ಮ ವಿಶ್ವಾಸಿ,

09.04.2020

ನಿರ್ದೇಶಕರು,
ಸಮಗ್ರ ಮಕ್ಕಳ ರಕ್ಷಣಾ ಯೋಜನೆ,
ಬೆಂಗಳೂರು.

REDMI NOTE 8
AI QUAD CAMERA